# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಮಾತೃದೇವತೆಯ ಕೋಪ ಬದುಕು ಕಳಸುವುದು
ಜನುಮದಾತನ ಕೋಪ ದಾರಿ ಸುಗಮಗೊಳಿಸುವುದು
ಗುರುವಿನ ಕೋಪ ಜ್ಞಾನಾಭಿವೃದ್ಧಿ ಮಾಡುವುದು
ಹೆಣ್ಣಿನ ಕೋಪ ಜೀವನವನ್ನೇ ಮುಗಿಸುವುದು
ವೈರಾಗಿಯ ಕೋಪ ಮತಿ ಕೆಡಿಸುವುದು
ಹಿರಿಯರ ಕೋಪ ಕರ್ಮ ಹೆಚ್ಚಿಸುವುದು
ದೇವಾದಿ ದೇವತೆಯ ಕೋಪ ಕುಂಠಿತಗೊಳಿಸುವುದು
ಬಡವನ ಕೋಪ ದವಡೆಗೆ ಮೂಲವಾಗುವುದು
ಅನ್ನದಾತನ ಕೋಪ ಹಸಿವಿನಿಂದ ನರಳಿಸುವುದು
ಕೋಪ ತಾಪವ ಬಿಟ್ಟು ಬದುಕಿದರೆ ಮುಕ್ತಿ ಸಿಗುವುದು

**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 04-07-2025 to 10-07-2025 ಬೆಲೆ: 7-00 ಸಂಪುಟ–5 ಸಂಚಿಕೆ–2 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು






ಬಿಟ್ಟು ಬಿಟ್ಟು ಸುರಿಯುತ್ತಿರುವ ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಲಗ್ಗೆಯಿಡುತ್ತಿದೆ. ಅದರಲ್ಲೂ ಡೆಂಗ್ಯೂ, ಮಲೇರಿಯಾದಂತಹ ಸೊಳ್ಳೆಯಿಂದ ಹರಡುವ ಕಾಯಿಲೆಗಳು ನಗರ ಪ್ರದೇಶವಲ್ಲದೆ ಗ್ರಾಮಾಂತರ ಪ್ರದೇಶಗಳಲ್ಲಿಯೂ ಹೆಚ್ಚು ಕಂಡುಬರುತ್ತಿದೆ. ಆದ್ದರಿಂದ ಈ ಸಮಯದಲ್ಲಿ ನಮ್ಮ ಮನೆಯ ಸುತ್ತಮುತ್ತ ನೀರು ನಿಲ್ಲಬಹುದಾದ ಜಾಗಗಳನ್ನು ಮುಚ್ಚಿ ಸಾಂಕ್ರಾಮಿಕ ರೋಗ ಹರಡುವುದನ್ನು ತಡೆಯಬೇಕಾಗಿರುವುದು ಸಾರ್ವಜನಿಕರ ಆದ್ಯ ಕರ್ತವ್ಯ.

## ನವಜಾತ ಮಕ್ಕಳಿಗೆ ಸಂಜೀವಿನಿಯಾದ ಮಿಲ್ಕ್ ಬ್ಯಾಂಕ್




**ಮಂಗಳೂರು:** ನವಜಾತ ಶಿಶುಗಳಿಗೆ ತಾಯಿಯ ಎದೆ ಹಾಲು ಅಮೃತಪಾನಕ್ಕೆ ಸಮಾನ. ಆದರೆ ಕೆಲವು ತಾಯಂದಿರಿಗೆ ಎದೆ ಹಾಲಿನ ಕೊರತೆ ಇರುತ್ತದೆ. ಇದಕ್ಕಾಗಿ ಮಂಗಳೂರಿನ ಸರಕಾರಿ ಲೇಡಿಗೋಷನ್ ಆಸ್ಪತ್ರೆಯಲ್ಲಿ 2022ರಲ್ಲಿ ಸ್ಥಾಪನೆಯಾದ "ಅಮೃತ ಹ್ಯೂಮನ್ ಮಿಲ್ಕ್ ಬ್ಯಾಂಕ್" ಅವಧಿ ಪೂರ್ವ ಜನನವಾದ ಶಿಶುಗಳ ಮರಣ ತಪ್ಪಿಸುವಲ್ಲಿ ಅಮೃತ ಸಂಜೀವಿನಿಯಾಗಿ ಕಾರ್ಯ ನಿರ್ವಹಿಸುತ್ತಿದೆ ಎನ್ನುವುದು ಖುಷಿಯ ವಿಷಯ. ರೋಟರಿ ಕ್ಲಬ್‌ನಿಂದ 35ಲಕ್ಷ ವೆಚ್ಚದಲ್ಲಿ ಮೂರು ವರ್ಷಗಳ ಹಿಂದೆ ಈ ಘಟಕ ಸ್ಥಾಪನೆಯಾಗಿದ್ದು, ಅವಧಿ ಪೂರ್ವ ಜನನವಾಗುವ **3ನೇ ಪುಟಕ್ಕೆ**

## ಮುದ್ರಣ ಮಾಧ್ಯಮಗಳ ಮೇಲೆ ಹೆಚ್ಚು ವಿಶ್ವಾಸ –ವಾ. ನಂದಳಿಕೆ



**ಮಂಗಳೂರು:** ಮುದ್ರಣ ಮಾಧ್ಯಮಗಳ ಮೇಲೆ ಜನರಿಗೆ ಹೆಚ್ಚು ವಿಶ್ವಾಸ ಇನ್ನೂ ಉಳಿದಿದೆ ಎನ್ನುವ ಅಭಿಪ್ರಾಯ ಇದೆ ಎಂದು ವಾಲ್ಟರ್ ನಂದಳಿಕೆ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಕಾರ್ಯ ನಿರತ ಪತ್ರಕರ್ತರ ಸಂಘದ ವತಿಯಿಂದ ಮಂಗಳೂರು ಪತ್ರಿಕಾ ಭವನದಲ್ಲಿ ಹಮ್ಮಿಕೊಂಡ ಪತ್ರಿಕಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾಧ್ಯಮದ ಸವಾಲುಗಳು ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು. ಇತ್ತೀಚೆಗೆ ಸಮೀಕ್ಷೆಯೊಂದರ ಪ್ರಕಾರ ಶೇ.60ರಷ್ಟು ಜನರು ಮುದ್ರಣ ಮಾಧ್ಯಮವನ್ನು ನಂಬುತ್ತಾರೆ. ಶೇ.63ರಷ್ಟು **3ನೇ ಪುಟಕ್ಕೆ**

## ನಿಮ್ಮ ನಾಯಕರು ಕಪ್ಪ ಸ್ವೀಕರಿಸಲು ಬರುತ್ತಾರೆಯೇ–ಆರ್ ಪದ್ಮರಾಜ್



**ಮಂಗಳೂರು:** ಬಿಜೆಪಿಯ ಪ್ರಧಾನ ಕಾರ್ಯದರ್ಶಿಯಾಗಿರುವ ಧರ್ಮೇಂದ್ರ ಪ್ರದಾನ್, ರಾಧಾ ಮೋಹನ್‌ರವರು ಕರ್ನಾಟಕಕ್ಕೆ ಆಗಾಗ್ಗೆ ಬರುತ್ತಿರುತ್ತಾರೆ. ಅವರು ನಿಮ್ಮಿಂದ ಕಪ್ಪ ಸ್ವೀಕರಿಸಲು ಬರುತ್ತಿದ್ದಾರೆಯೇ ಎಂದು ಕೆಪಿಸಿಸಿ ಮಾಜಿ ಪ್ರಧಾನ ಕಾರ್ಯದರ್ಶಿ ಪದ್ಮರಾಜ್ ಆರ್. ಪೂಜಾರಿ ಪ್ರಶ್ನಿಸಿದ್ದಾರೆ. ದ.ಕ. ಜಿಲ್ಲಾ ಕಾಂಗ್ರೆಸ್‌ನ ಕಚೇರಿಯಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ನಾವು ಪಕ್ಷದ ಕಾರ್ಯ ಚಟುವಟಿಕೆಗಳ ಬಗ್ಗೆ ತಿಳಿಯಲು ಅವರು ಬರುತ್ತಿರಬಹುದು ಎಂದುಕೊಂಡಿದ್ದೆವು. **3ನೇ ಪುಟಕ್ಕೆ**






# ಸುದ್ಧಿ ತುಣುಕು

ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಕುರಿತು ಅವಹೇಳನಕಾರಿಯಾಗಿ ಮಾತನಾಡಿದ್ದಾರೆ ಎಂಬ ಆರೋಪದಡಿ ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಬೆಂಗಳೂರು ವಿಮಾನ ನಿಲ್ದಾಣದ ಟರ್ಮಿನಲ್ 1 ಹಾಗೂ 2ರಲ್ಲಿರುವ ದೇಶೀಯ ಹಾಗೂ ಅಂತರರಾಷ್ಟ್ರೀಯ ಲಾಂಜ್‌ಗಳಲ್ಲಿಯ ಪ್ರಯಾಣಿಕರ ಸ್ನೇಹಿ ವಾತಾವರಣ, ರೆಸ್ಟೋರೆಂಟ್ ವಿನ್ಯಾಸ ಹಾಗೂ ಇಲ್ಲಿ ಪೂರೈಸುವ ಆಹಾರ ಮತ್ತು ಪಾನೀಯಗಳ ಗುಣಮಟ್ಟಕ್ಕೆ ಒಟ್ಟು ಹತ್ತು ಜಾಗತಿಕ ಪ್ರಶಸ್ತಿ ಲಭಿಸಿವೆ.

ಡಿ.ಕೆ. ಶಿವಕುಮಾರ್ ಸಾರ್ವಜನಿಕ ಸಂಪರ್ಕದಲ್ಲಿ ವಿಫಲರಾಗಿದ್ದಾರೆ. ಶಾಸಕರನ್ನು ಕಂಡರೂ ಕಾಣದಂತೆ ಹೋಗುತ್ತಾರೆ. ನಡವಳಿಕೆಯೇ ಅವರಿಗೆ ತೊಡಕಾಗಿರುವುದರಿಂದ ಶಾಸಕರ ಬಲವು ಕಮ್ಮಿ ಇದೆ. ಅವರು ಮುಖ್ಯಮಂತ್ರಿ ಆಗಬೇಕು ಎಂದು ನಾನು ಸಹ ಬಯಸುತ್ತೇನೆ. ಆದರೆ, ಈ ಅವಧಿಯಲ್ಲಿ ಆಗೋದು ಕಷ್ಟ' ಎಂದು ಮಾಜಿ ಶಾಸಕ ಸಿ.ಎಂ. ಲಿಂಗಪ್ಪ ಅಭಿಪ್ರಾಯಪಟ್ಟರು.

ಗುಡಿಬಂಡೆ ತಾಲ್ಲೂಕು ಕಚೇರಿಯ ಹಂಪಸಂದ್ರ ಕಂದಾಯ ವೃತ್ತದ ಗ್ರಾಮ ಆಡಳಿತಾಧಿಕಾರಿ ನಾಗರಾಜ್ ಲೋಕಾಯುಕ್ತರಿಂದ ಬಂಧನವಾಗಿದ್ದಾರೆ.

ಕೆಲವು ದಿನಗಳಿಂದ ಏರುಗತಿಯಲ್ಲಿ ಸಾಗಿದ್ದ ಉಂಡೆ ಕೊಬ್ಬರಿ ಧಾರಣೆ ಮೂರು ದಿನಗಳ ಅಂತರದಲ್ಲಿ ಕ್ವಿಂಟಲ್‌ಗೆ ರೂ. 3,606ರಷ್ಟು ಕುಸಿದಿದ್ದು, ರೂ. 28,000ಕ್ಕೆ ಇಳಿದಿದೆ.

ಪಶ್ಚಿಮ ಬಂಗಾಳ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಸಮಿಕ್ ಭಟ್ಟಾಚಾರ್ಯ ಆಯ್ಕೆ

ಪರಿಶಿಷ್ಟ ಜಾತಿ ಸಮೀಕ್ಷೆಯಲ್ಲಿ ಸ್ಟಿಕ್ಕರ್ ಅಂಟಿಸುವ ಕಾರ್ಯದಲ್ಲಿ ಕರ್ತವ್ಯ ಲೋಪವೆಸಗಿದ ಆರೋಪದಡಿ ಮೂವರು ಅಮಾನತು

ಬೈಕ್ ಟ್ಯಾಕ್ಸಿ ಪ್ರಯಾಣಕ್ಕೆ ಕೇಂದ್ರದಿಂದ ಹಸಿರು ನಿಶಾನೆಸಿಕ್ಕಿದ್ದು, ಮಾರ್ಗಸೂಚಿ ಪ್ರಕಟ

ಇತರ ದೇವಾಲಯಗಳಂತೆ ಚಾಮುಂಡಿ ಬೆಟ್ಟದಲ್ಲೂ ವಸ್ತ್ರಸಂಹಿತೆ ಜಾರಿಯಾಗಬೇಕು. ಜನರು ಧಾರ್ಮಿಕ ಭಾವನೆಯಿಂದ ದೇವಾಲಯಗಳಿಗೆ ಬರಬೇಕು. ನಾನು ಯಾವಾಗಲೂ ವಸ್ತ್ರಸಂಹಿತೆ ಪರವಾಗಿರುತ್ತೇನೆ ಎಂದು ಸಂಸದ ಯದುವೀರ್ ಒಡೆಯರ್ ಹೇಳಿದರು.

ಕೊರೊನಾ ಲಸಿಕೆ – ಹೃದಯಾಘಾತದ ಸಾವುಗಳಿಗೆ ಯಾವುದೇ ಸಂಬಂಧವಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಿದೆ.

ಸಿಎಂ ಸಿದ್ದರಾಮಯ್ಯ ಭೇಟಿಯಾದ ಅವಳಿ ಒಲಿಂಪಿಕ್ಸ್ ಪದಕ ವಿಜೇತ ನೀರಜ್ ಚೋಪ್ರಾ

ಜುಲೈ 1ರಿಂದಲೇ ರೈಲ್ವೇ ಹೊಸ ನಿಯಮ ಜಾರಿ: ತತ್ಕಾಲ್ ಬುಕಿಂಗ್‌ನಲ್ಲಿ ಗಮನಾರ್ಹ ಬದಲಾವಣೆ


9 ಸಾವಿರ ಉದ್ಯೋಗಿಗಳನ್ನು ಕಡಿತಗೊಳಿಸಲು ಮುಂದಾದ ಟೆಕ್ ದೈತ್ಯ ಮೈಕ್ರೋಸಾಫ್ಟ್

ರಕ್ಷಣಾ ಸಹಭಾಗಿತ್ವಕ್ಕಾಗಿ ಹತ್ತು ವರ್ಷಗಳ ರಕ್ಷಣಾ ಚೌಕಟ್ಟಿಗೆ ಅಮೆರಿಕ – ಭಾರತ ಸಹಿ

ರಸ್ತೆ ತೆರಿಗೆ ವಂಚಿಸಿ ರಾಜ್ಯದಲ್ಲಿ ಸುತ್ತಾಡಿದ ಮಹಾರಾಷ್ಟ್ರ ನೋಂದಣಿ ಸಂಖ್ಯೆಯ ಫೆರಾರಿ ಕಾರು ಮಾಲೀಕನಿಂದ ಬೆಂಗಳೂರು ದಕ್ಷಿಣ ವಿಭಾಗದ ಆರ್‌ಟಿಒ ಅಧಿಕಾರಿಗಳು 1.4 ಕೋಟಿ ರೂ ದಂಡ ವಸೂಲಿ ಮಾಡಿದ್ದಾರೆ.

ದೂಧ್ ಸಾಗರ್ ಜಲಪಾತ ವೀಕ್ಷಣೆಗೆ ಅಕ್ರಮ ಪ್ರವೇಶ ಮಾಡಿದ 21 ಜನರ ವಿರುದ್ಧ ಪ್ರಕರಣ ದಾಖಲಾಗಿದೆ.

# ಶುಂಠಿ ಅನ್ನ



**ಬೇಕಾಗುವ ಸಾಮಾಗ್ರಿಗಳು :**

ಎಣ್ಣೆ – 4 ಚಮಚ
ಸಾಸಿವೆ – 1 ಚಮಚ
ಕರಿಬೇವು – 10–12 ಎಲೆ
ಸಣ್ಣಗೆ ಹೆಚ್ಚಿದ ಬೆಳ್ಳುಳ್ಳಿ – 2 ಚಮಚ
ಸಣ್ಣಗೆ ಹೆಚ್ಚಿದ ಶುಂಠಿ – 5 ಚಮಚ
ಸಣ್ಣಗೆ ಹೆಚ್ಚಿದ ಈರುಳ್ಳಿ – 4 ಚಮಚ
ಅರಶಿನ ಪುಡಿ – 2 ಚಿಟಿಕೆ
ಮೆಣಸಿನ ಪುಡಿ – ಅರ್ಧ ಚಮಚ
ಕಾಲು ಮೆಣಸಿನ ಪುಡಿ – 1/3 ಚಮಚ
ಬೇಯಿಸಿದ ಅನ್ನ – 4 ಕಪ್
ಹೆಚ್ಚಿದ ಕೊತ್ತಂಬರಿ ಸೊಪ್ಪು – 1ಚಮಚ
ಲಿಂಬೆ ರಸ – 2 ಚಮಚ
ಉಪ್ಪು – ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :**

ಮೊದಲಿಗೆ ಒಂದು ಬಾಣಲೆಯಲ್ಲಿ ಎಣ್ಣೆ ಹಾಕಿಕೊಂಡು ಬಿಸಿ ಮಾಡಿ ಅದಕ್ಕೆ ಸಾಸಿವೆ ಹಾಕಿ, ಅದು ಸಿಡಿದ ಮೇಲೆ ನಂತರ ಕರಿಬೇವಿ ಹಾಕಬೇಕು. ನಂತರ ಬೆಳ್ಳುಳ್ಳಿ, ಹಸಿ ಶುಂಠಿಯನ್ನು ಹಾಕಿಕೊಂಡು, 5 ನಿಮಿಷಗಳ ಕಾಲ ಸಣ್ಣ ಉರಿಯಲ್ಲಿ ಹುರಿದುಕೊಳ್ಳಬೇಕು. ನಂತರ ಅದಕ್ಕೆ ಈರುಳ್ಳಿ ಹಾಕಿ ಚೆನ್ನಾಗಿ ಕಲಸಿಕೊಂಡು, ಅರಶಿನ ಪುಡಿ, ಮೆಣಸಿನಪುಡಿ ಹಾಗೂ ಕಾಳು ಮೆಣಸಿನ ಪುಡಿ ಹಾಕಿ ಚೆನ್ನಾಗಿ ಕಲಸಿ ಒಂದು ನಿಮಿಷ ಹುರಿದುಕೊಳ್ಳಬೇಕು. ಈಗ ಇದಕ್ಕೆ ಬೇಯಿಸಿಟ್ಟ ಅನ್ನ ಹಾಗೂ ರುಚಿಗೆ ತಕ್ಕಷ್ಟು ಉಪ್ಪನ್ನು ಕೂಡ ಹಾಕಿ ಚೆನ್ನಾಗಿ ಕಲಸಿದ ನಂತರ, ಕೊತ್ತಂಬರಿ ಸೊಪ್ಪನ್ನು ಹಾಗೂ ಲಿಂಬೆ ರಸ ಹಾಕಿ ಚೆನ್ನಾಗಿ ಕಲಸಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಶುಂಠಿ ಅನ್ನ ಸವಿಯಲು ಸಿದ್ಧ.

# "ಒನ್ ಬಿಗ್ ಬ್ಯೂಟಿಫುಲ್ ಬಿಲ್" ಅಮೆರಿಕದ ಸಂಸತ್ತಿಲ್ಲಿ ಅಂಗೀಕಾರ



ಅಮೆರಿಕ: ಕ್ರಾಂತಿಕಾರಿ ಬದಲಾವಣೆಗಳುಳ್ಳ 'ಒನ್ ಬಿಗ್ ಬ್ಯೂಟಿಫುಲ್ ಬಿಲ್' ತೀವ್ರ ಚರ್ಚೆಯ ಬಳಿಕ ಅಮೆರಿಕದ ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕಾರವಾಗಿದೆ. ದೇಶದ ಹಲವು ಕ್ಷೇತ್ರಗಳಲ್ಲಿ ಮಹತ್ತರ ಬದಲಾವಣೆ ತರಲಿರುವ ಈ ಮಸೂದೆ, ಭಾರತದ ಮೇಲೂ ಪರಿಣಾಮ ಉಂಟು ಮಾಡಲಿದೆ. ತೆರಿಗೆ, ವಲಸೆ ನೀತಿ, ವೇತನ, ಗಡಿ ಭದ್ರತೆ, ಮಿಲಿಟರಿ, ಮೆಡಿಕ್ ಏಡ್, ಮೆಡಿಕೇರ್, ಸಾಮಾಜಿಕ ಭದ್ರತೆಯಂತಹ ಹಲವು ಕ್ಷೇತ್ರಗಳಲ್ಲಿ ಬದಲಾವಣೆ ತರಲಿರುವ ಈ ಮಸೂದೆಗೆ ತೀವ್ರ ವಿರೋಧ ಮತ್ತು ಪರ ಕೇಳಿ ಬಂದಿತ್ತು. ಕೆಳಮನೆಯಾದ ಹೌಸ್ ಆಫ್ ರೆಪ್ರೆಸೆಂಟೇಟಿವ್‌ನಲ್ಲಿ ತಾತ್ಕಾಲಿಕ ಅಂಗೀಕಾರವಾಗಿದ್ದ ಮಸೂದೆಯು ಮೇಲ್ಮನೆಯಾದ ಸೆನೆಟ್‌ನಲ್ಲಿ ಪಾಸ್ ಆಗಲು ಭಾರೀ ಕಸರತ್ತು ನಡೆಸಿತು.

# ಪಾಕಿಸ್ತಾನದಲ್ಲಿ ಪೋಲಿಯೊ ಲಸಿಕೆ ನಿರಾಕರಿಸಿದ ಪೋಷಕರು !




ಪಾಕಿಸ್ತಾನ : ಈ ವರ್ಷದ ಏಪ್ರಿಲ್ 21 ರಿಂದ 27 ರವರೆಗೆ ನಡೆಸಿದ ರಾಷ್ಟ್ರವ್ಯಾಪಿ ಪೋಲಿಯೊ ವಿರೋಧಿ ಅಭಿಯಾನದಲ್ಲಿ ಪಾಕಿಸ್ತಾನ 60,000ಕ್ಕೂ ಹೆಚ್ಚು ಪೋಲಿಯೊ ಲಸಿಕೆ ನಿರಾಕರಣೆ ಪ್ರಕರಣಗಳನ್ನು ದಾಖಲಿಸಿದೆ ಎಂದು ಅಧಿಕೃತ ಮೂಲಗಳನ್ನು ಉಲ್ಲೇಖಿಸಿ ಮಾಧ್ಯಮವೊಂದು ವರದಿ ಮಾಡಿದೆ. 2025ರ ದೇಶದ ಎರಡನೇ ರಾಷ್ಟ್ರೀಯ ಪೋಲಿಯೊ ನಿರ್ಮೂಲನಾ ಅಭಿಯಾನದಲ್ಲಿ ಒಟ್ಟು 60, 906 ಪೋಲಿಯೊ ಲಸಿಕೆ ನಿರಾಕರಣೆಗಳನ್ನು ದಾಖಲಿಸಲಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಸಿಂಧ್ ಪ್ರಾಂತ್ಯದಿಂದಲೇ ಅತಿ ಹೆಚ್ಚು ನಿರಾಕರಣೆಗಳು ವರದಿಯಾಗಿವೆ. 39,073 ಪ್ರಕರಣಗಳಲ್ಲಿ 37,000 ಕ್ಕೂ ಹೆಚ್ಚು ಕರಾಚಿಯಿಂದಲೇ ಎಂದು ವರದಿ ತಿಳಿಸಿದೆ.

# ಭಾರತ ಪಾಕಿಸ್ತಾನದ ಸಂಘರ್ಷವನ್ನು ನಾನೇ ನಿಲ್ಲಿಸಿದ್ದು – ಟ್ರಂಪ್



ವಾಷಿಂಗ್ಟನ್: ನೊಬೆಲ್ ಶಾಂತಿ ಪ್ರಶಸ್ತಿ ಮೇಲೆ ಕಣ್ಣಿಟ್ಟಂತಿರುವ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಾನು ಮಾಡದ ಕೆಲಸಗಳ ಶ್ರೇಯ ಪಡೆದುಕೊಳ್ಳಲು ಪದೇಪದೆ ಪ್ರಯತ್ನಿಸುತ್ತಿದ್ದಾರೆ. ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷವನ್ನು ನಿಲ್ಲಿಸಿದ್ದು ತಾನೇ ಎಂದು 20ನೇ ಬಾರಿ ಹೇಳಿಕೊಂಡಿದ್ದಾರೆ. ಪಹಲ್ಗಾಮ್ ದಾಳಿಯ ಬಳಿಕ ಭಾರತ ಪಾಕಿಸ್ತಾನದ ಮೇಲೆ ಆಪರೇಷನ್ ಸಿಂದೂರ ಕಾರ್ಯಾಚರಣೆ ನಡೆಸಿದಾಗ ತತ್ತರಿಸಿದ ಆ ದೇಶ ಕದನ ವಿರಾಮಕ್ಕೆ ಯಾಚಿಸಿತ್ತು. ಹೀಗಾಗಿ, ನಾವು ಕಾರ್ಯಾಚರಣೆ ನಿಲ್ಲಿಸಿದೆವು ಎಂದು ಭಾರತ ಅಮೆರಿಕದ ಅಧ್ಯಕ್ಷರಿಗೆ ಸ್ಪಷ್ಟನೆ ನೀಡಿತ್ತು. ಇದನ್ನು ಸ್ವತಃ ಪಾಕಿಸ್ತಾನವೂ ಒಪ್ಪಿಕೊಂಡಿತ್ತು.

# ಎಸ್‌ಸಿಒ ಜಂಟಿ ಹೇಳಿಕೆಗೆ ಸಹಿ ಹಾಕಲು ನಿರಾಕರಿಸಿದ ಭಾರತ !



ಚೀನಾ : ಗಡಿಯಾಚೆಗಿನ ಭಯೋತ್ಪಾದನೆಯ ಬಗ್ಗೆ ಸ್ಪಷ್ಟ ನಿಲುವು ತಳೆಯದ ಶಾಂಘೈ ಸಹಕಾರ ಸಂಘಟನೆಯ (ಎಸ್‌ಸಿಒ) ಜಂಟಿ ಹೇಳಿಕೆಗೆ ಸಹಿ ಹಾಕಲು ಭಾರತ ನಿರಾಕರಿಸಿದೆ. ಈ ಮೂಲಕ ಚೀನಾದ ನೆಲದಲ್ಲಿ ನಿಂತು, ಪಾಕಿಸ್ತಾನ ಮತ್ತು ಅದನ್ನು ಬೆಂಬಲಿಸುವ ರಾಷ್ಟ್ರಗಳಿಗೆ ಖಡಕ್ ಸೂಚನೆ ರವಾನಿಸಿದೆ. ಚೀನಾದ ಶಿಂಗ್ಡಾಂವ್‌ನಲ್ಲಿ ಶಾಂಘೈ ಸಹಕಾರ ಸಂಘಟನೆಯ ರಕ್ಷಣಾ ಸಚಿವರ ಸಭೆ ನಡೆಯಿತು. ಇದರಲ್ಲಿ ಭಾರತದ ಪರವಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗವಹಿಸಿದ್ದರು.

# ಹೊಸ ಭಾರತಕ್ಕೆ ಆಕಾಶದ ಮಿತಿಯಲ್ಲ-ಪ್ರಧಾನಿ



ಪೋರ್ಟ್ ಆಫ್ ಸ್ಪೈನ್: ಜಗತ್ತಿನ ಪ್ರಮುಖ ಮೂರು ಆರ್ಥಿಕತೆಯಲ್ಲಿ ಶೀಘ್ರದಲ್ಲೇ ಭಾರತವೂ ಒಂದಾಗಲಿದೆ. ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್ ಮತ್ತು ಕ್ವಾಂಟಮ್ ಕಂಪ್ಯೂಟರ್ ಬೆಳವಣಿಗೆಯ ಹೊಸ ಎಂಜಿನ್ ಆಗಿದೆ ಎಂದು ಪ್ರಧಾನಮಂತ್ರಿ ಮೋದಿ ಬಣ್ಣಿಸಿದ್ದಾರೆ. ಟ್ರಿನಿಡಾಡ್ ಮತ್ತು ಟೊಬಾಗೊದಲ್ಲಿ ಅನಿವಾಸಿ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತವು ಇಂದು ಅವಕಾಶಗಳ ಕೇಂದ್ರವಾಗಿದ್ದು, ಬೆಳವಣಿಗೆ ಮತ್ತು ಪ್ರಗತಿಯ ಫಲಗಳು ಅಗತ್ಯ ಇದ್ದವರನ್ನು ತಲುಪುತ್ತವೆ. ಹೊಸ ಭಾರತಕ್ಕೆ ಆಕಾಶವೂ ಮಿತಿಯಲ್ಲ. ಇಂದು ಭಾರತವು ವಿಶ್ವದ 3ನೇ ಅತಿದೊಡ್ಡ ಸ್ಟಾರ್ಟ್‌ಅಪ್ ಕೇಂದ್ರವಾಗಿದೆ. ಈ ಸ್ಟಾರ್ಟ್‌ಅಪ್‌ಗಳಲ್ಲಿ ಸುಮಾರು ಅರ್ಧದಷ್ಟು ಮಹಿಳೆಯರು ನಿರ್ದೇಶಕಿಯಾಗಿದ್ದಾರೆ. ಸುಮಾರು 120 ಸ್ಟಾರ್ಟ್ ಅಪ್‌ಗಳು ಯುನಿಕಾರ್ನ್ ಸ್ಥಾನಮಾನವನ್ನು ಪಡೆದುಕೊಂಡಿವೆ ಎಂದು ಪ್ರಧಾನಿ ಅಂಕಿ-ಅಂಶಗಳ ಸಮೇತ ವಿವರಣೆ ನೀಡಿದ್ದಾರೆ.

# ಕ್ರೀಡಾ ತರಬೇತುದಾರರ ವರ್ಗಾವಣೆ ಆದೇಶಕ್ಕೆ ತಡೆಯಾಜ್ಞೆ




ಬೆಂಗಳೂರು: ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಗುತ್ತಿಗೆ ಒಪ್ಪಂದದಲ್ಲಿ ಮಾಸಿಕ ಸಂಚಿತ ವೇತನದ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಾಲಿಬಾಲ್ ಹಾಗೂ ಬಾಸ್ಕೆಟ್‌ಬಾಲ್ ತರಬೇತುದಾರರ ವರ್ಗಾವಣೆ ಮಾಡಿ ಹೊರಡಿಸಿದ್ದ ಸರ್ಕಾರದ ಆದೇಶಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡಿ ಆದೇಶಿಸಿದೆ. ವರ್ಗಾವಣೆ ಆದೇಶ ಪ್ರಶ್ನಿಸಿ ಮಿರ್ಜಾ ಷಾ ಜಮಾ, ವೀರಣ್ಣಗೌಡ ಎಸ್.ಪಾಟೀಲ್, ಎನ್.ಎ. ಮೀರಜ್‌ಕರ್, ಪಿ.ಕೆ. ಹಸನ್‌ಕರ್ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರ ತರಬೇತುದಾರರು ಕ್ಷೇಮಾಭಿವೃದ್ಧಿ ಸಂಘ ವರ್ಗಾವಣೆ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿತ್ತು. ಈ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಚ್.ಟಿ.ನರೇಂದ್ರಪ್ರಸಾದ್ ಅವರಿದ್ದ ನ್ಯಾಯಪೀಠ, ಆದೇಶಕ್ಕೆತಡೆ ನೀಡಿದೆ.

# ನೀರಜ್ ಚೋಪ್ರಾಗೆ ವಿಶ್ವ ಜಾವೆಲಿನ್‌ನಲ್ಲಿ ಅಗ್ರ ಶ್ರೇಯಾಂಕ



ಹೈದರಾಬಾದ್: ವಿಶ್ವ ಅಥ್ಲೆಟಿಕ್ಸ್ ಜಾವೆಲಿನ್ ಥ್ರೋನ ಹೊಸ ರ್‍ಯಾಂಕಿಂಗ್ ಬಿಡುಗಡೆ ಮಾಡಿದೆ. ಇದರಲ್ಲಿ ಟೋಕಿಯೊ ಒಲಿಂಪಿಕ್ಸ್ ಚಿನ್ನದ ಪದಕ ವಿಜೇತ ನೀರಜ್ ಚೋಪ್ರಾ ಮತ್ತೊಮ್ಮೆ ಅಗ್ರ ಸ್ಥಾನವನ್ನು ಪಡೆದುಕೊಂಡಿದ್ದಾರೆ. ಕಳೆದ ವರ್ಷ ಸೆಪ್ಟೆಂಬರ್ 17ರಂದು ಗ್ರೆನಡಾದ ಆಂಡರ್ಸನ್ ಪೀಟರ್ಸ್ ವಿರುದ್ಧ ನೀರಜ್ ಅಗ್ರ ಸ್ಥಾನವನ್ನು ಕಳೆದುಕೊಂಡಿದ್ದರು. ಆದರೆ ಅವರು ಅದ್ಭುತ ಪ್ರದರ್ಶನ ನೀಡಿ ಬ್ರಸೆಲ್ಸ್‌ನಲ್ಲಿ ನಡೆದ ಡೈಮಂಡ್ ಲೀಗ್ 2025 ರ ಫೈನಲ್‌ನಲ್ಲಿ ಗೆಲುವು ಸಾಧಿಸಿದ್ದರಿಂದ ಮತ್ತೆ ಅಗ್ರ ಸ್ಥಾನಕ್ಕೆ ಏರುವಲ್ಲಿ ಯಶಸ್ವಿಯಾಗಿದ್ದಾರೆ.

# ಸಾರ್ವಜನಿಕ ಕಾರ್ಯಕ್ರಮಗಳಿಗೆ ಮಾರ್ಗಸೂಚಿ ಪ್ರಕಟ



GOVERNMENT OF KARNATAKA
(Police Department)

Sub: Standard Operating Procedure (SOP) for Crowd Management at Events and Mass Gatherings

1. Introduction


ಬೆಂಗಳೂರು: ಎಂ.ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ದುರಂತದ ಬಳಿಕ ಎಚ್ಚೆತ್ತಿರುವ ರಾಜ್ಯ ಸರ್ಕಾರ ಮುಂದಿನ ಸಾರ್ವಜನಿಕ ಕಾರ್ಯಕ್ರಮಗಳು ಹಾಗೂ ಬೃಹತ್ ಸಮಾರಂಭಗಳ ಸಂದರ್ಭದಲ್ಲಿ ಜನಸಂದಣಿ ನಿರ್ವಹಣೆ ಕುರಿತು ಹೊಸ ಮಾರ್ಗಸೂಚಿ ಪ್ರಕಟಿಸಿದೆ.ಜನಸಂದಣಿ ಸೇರುವ ಹಬ್ಬಗಳು, ಪ್ರತಿಭಟನೆಗಳು, ಮೆರವಣಿಗೆಗಳು ಮತ್ತು ಕ್ರೀಡಾಕೂಟಗಳಂತಹ ಕಾರ್ಯಕ್ರಮಗಳಿಗೆ ಭದ್ರತೆ, ಕಾನೂನು-ಸುವ್ಯವಸ್ಥೆ ಕಾಪಾಡಲು ಜನಸಂದಣಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಈ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನವನ್ನು ರೂಪಿಸಲಾಗಿದೆ ಎಂದು ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

# ರೈಲುಗಳ ಪ್ರಯಾಣ ದರ ಏರಿಕೆಯನ್ನು ಹಿಂಪಡೆಯಬೇಕು : ಸಿಎಂ




ಬೆಂಗಳೂರು: ಸಾಮಾನ್ಯ ಜನರ ಸಾರಿಗೆ ಎಂದೇ ಜನಪ್ರಿಯವಾಗಿರುವ ರೈಲುಗಳ ಪ್ರಯಾಣ ದರವನ್ನು ಹೆಚ್ಚಿಸುವ ಮೂಲಕ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ದೇಶದ ಕೋಟ್ಯಂತರ ಮಧ್ಯಮ ಮತ್ತು ಬಡವರ್ಗದ ಬದುಕಿನ ಮೇಲೆ ಬರೆ ಎಳೆದಿದೆ. ಈ ಬೆಲೆ ಏರಿಕೆಯನ್ನು ತಕ್ಷಣ ಹಿಂದೆಗೆದುಕೊಳ್ಳಬೇಕು ಎಂದು ಪ್ರಧಾನಿ ಮೋದಿಯವರನ್ನು ಒತ್ತಾಯಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ. ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಏರುತ್ತಲೇ ಇರುವ ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ದರಗಳ ಭಾರದಿಂದ ಜನರು ಈಗಾಗಲೇ ತತ್ತರಿಸಿಹೋಗಿದ್ದಾರೆ ಎಂದಿದ್ದಾರೆ.

# ಬಿಜೆಪಿ ಸಂಸದ ಡಾ. ಕೆ ಸುಧಾಕರ್ ವಿರುದ್ಧ ಕ್ರಮಕ್ಕೆ ಹೈಕೋರ್ಟ್ ತಡೆ




ಬೆಂಗಳೂರು : ಲೋಕಸಭೆ ಚುನಾವಣೆ ವೇಳೆ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮಾದಾವರ ಗೋವಿಂದಪ್ಪ ಅವರ ಮನೆಯಲ್ಲಿ 4.8 ಕೋಟಿ ರೂ.ಗಳ ಹಣವನ್ನು ಚುನಾವಣಾ ಆಯೋಗದ ಅಧಿಕಾರಿಗಳು ಜಪ್ತಿ ಮಾಡಿದ ಪ್ರಕರಣದಲ್ಲಿ ಬಿಜೆಪಿ ಸಂಸದ ಡಾ. ಕೆ ಸುಧಾಕರ್ ವಿರುದ್ಧ ವಿಚಾರಣಾಧೀನ ನ್ಯಾಯಾಲಯ ಸಂಜ್ಞೆ ಪರಿಗಣಿಸಿರುವ ಕ್ರಮಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ವಿಶೇಷ ನ್ಯಾಯಾಲಯವು ಸುಧಾಕರ್ ಮತ್ತು ಮಾದಾವರ ಗೋವಿಂದಪ್ಪ ಅವರ ವಿರುದ್ಧ ಸಂಜ್ಞೆ ಪರಿಗಣಿಸಿರುವುದನ್ನು ವಜಾಗೊಳಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಏಕಸದಸ್ಯ ಪೀಠ ತಡೆ ನೀಡಿದೆ.

# ದ್ವೇಷ ಭಾಷಣ, ನೈತಿಕ ಪೊಲೀಸ್‌ಗಿರಿ ಯಾರೇ ಮಾಡಿದರೂ ಸರಿಯಲ್ಲ



ಬೆಂಗಳೂರು: ದ್ವೇಷ ಭಾಷಣ, ನೈತಿಕ ಪೊಲೀಸ್ ಗಿರಿ ಯಾರೇ ಮಾಡಿದರೂ ಸರಿಯಲ್ಲ. ಅಂತಹ ಪ್ರಕರಣಗಳನ್ನು ನೋಡಲು ಪೊಲೀಸರು ಇದ್ದಾರೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದರು. ಶ್ರೀರಾಮಸೇನೆ ಕಾರ್ಯಕರ್ತರ ಮೇಲೆ ದಳ್ಳಾಳಿಗಳಿಂದ ಹಲ್ಲೆ ಪ್ರಕರಣ ಸಂಬಂಧ ಪ್ರತಿಕ್ರಿಯಿಸುತ್ತಾ, ಯಾರೂ ಕಾನೂನು ಕೈಗೆ ತೆಗೆದುಕೊಳ್ಳಬಾರದು. ಕಾನೂನು ಬಾಹಿರ ಚಟುವಟಿಕೆ ಕಂಡು ಬಂದರೆ ಪೊಲೀಸರಿಗೆ ತಿಳಿಸಲಿ. ಪೊಲೀಸರ ಕೆಲಸವೇ ಕಾನೂನು ಕಾಪಾಡೋದು. ನೀವ್ಯಾಕೆ ಆ ಕೆಲಸ ಮಾಡುತ್ತೀರಿ ?. ನೈತಿಕ ಪೊಲೀಸ್ ಗಿರಿ ಮಾಡಬಾರದು ಎಂದು ತಿಳಿಸಿದ್ದೇವೆ. ಮರಕ್ಕೆ ಕಟ್ಟಿ ಹಾಕಿ ಹೊಡೆದಿದ್ದು ಯಾರು?. ಏಕೆ ಅಂತ ಮಾಹಿತಿ ಪಡೆದು ಕ್ರಮ ಕೈಗೊಳ್ಳುತ್ತೇವೆ ಎಂದರು.

# ಕಳಪೆ ಬಿತ್ತನೆ, ನಕಲಿ ಡಿಎಪಿ ಗೊಬ್ಬರದಿಂದ ರೈತರು ಕಂಗಾಲು



ಹಾವೇರಿ : ಜಿಲ್ಲೆಯಲ್ಲಿ ಕಳಪೆ ಬಿತ್ತನೆ ಬೀಜದ ನಡುವೆ ಇದೀಗ ನಕಲಿ ರಸಗೊಬ್ಬರ ಹಾವಳಿ ಶುರುವಾಗಿದೆ. ಮುಂಗಾರು ಮಳೆ ಉತ್ತಮವಾಗುತ್ತಿದ್ದಂತೆ ಡಿಎಪಿ ಗೊಬ್ಬರ ಅಭಾವ ತಲೆದೋರಿತ್ತು. ಇದನ್ನೇ ಬಂಡವಾಳ ಮಾಡಿಕೊಂಡ ವ್ಯಾಪಾರಸ್ಥರು ಕಳಪೆ ಡಿಎಪಿ ಗೊಬ್ಬರ ಮಾರಾಟ ಮಾಡಿದ್ದು, ಖರೀದಿ ಮಾಡಿ ಬಿತ್ತನೆ ಮಾಡಿದ ಅನ್ನದಾತರು ಕಂಗಾಲಾಗಿದ್ದಾರೆ. ಕಳಪೆ ರಸಗೊಬ್ಬರ ಹಾಕಿದ ಬೆಳೆಗಳ ಬೆಳವಣಿಗೆ ಕುಂಠಿತಗೊಂಡಿವೆ. ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ಮಾಸನಕಟ್ಟಿ ಗ್ರಾಮದಲ್ಲಿ ಸುಮಾರು 28ಕ್ಕೂ ಅಧಿಕ ರೈತರು ಗ್ರಾಮದ ಎರಡು ಅಂಗಡಿಗಳಲ್ಲಿ ಡಿಎಪಿ ಗೊಬ್ಬರ ಖರೀದಿ ಮಾಡಿ ಬಿತ್ತನೆ ಮಾಡಿದ್ದರು.

# ಸರ್ಕಾರಿ ಕಟ್ಟಡ, ಸಭಾಂಗಣಗಳಿಗೆ ಸಕ್ರಿಯ ರಾಜಕಾರಣಿಗಳ ಹೆಸರು:ಹೈಕೋರ್ಟ್ ಗರಂ




ದಾವಣಗೆರೆ: ಸರ್ಕಾರಿ ಕಟ್ಟಡ, ಸಭಾಂಗಣಗಳು, ರಸ್ತೆ, ಉದ್ಯಾನವನ ಹೀಗೆ ವಿವಿಧ ಸರ್ಕಾರಿ ಆಸ್ತಿಗಳ ಮೇಲೆ ಜನಪ್ರತಿನಿಧಿಗಳ ಹೆಸರು ನಾಮಕರಣಕ್ಕೆ ಹೈಕೋರ್ಟ್ ಬ್ರೇಕ್ ಹಾಕಿದೆ. ಜೀವಂತವಿರುವ ರಾಜಕಾರಣಿಗಳ ಹೆಸರುಗಳನ್ನು ತೆಗೆದುಹಾಕುವಂತೆ ಹೈಕೋರ್ಟ್ ದಾವಣಗೆರೆ ಜಿಲ್ಲಾಡಳಿತಕ್ಕೆ ಸೂಚಿಸಿದೆ. ದಾವಣಗೆರೆ ಮಹಾನಗರ ಪಾಲಿಕೆ ಸಭಾಂಗಣ, ಜಿ.ಪಂ. ಸಭಾಂಗಣ, ನವೀಕೃತ ಹಳೇ ಬಸ್‌ನಿಲ್ದಾಣ, ಉದ್ಯಾವನಗಳಿಗೆ ನಾಮಕರಣ ಮಾಡಿರುವ ಜನಪ್ರತಿನಿಧಿಗಳ ನಾಮಫಲಕಗಳನ್ನು ತೆಗೆಯಲು ಹೈಕೋರ್ಟ್ ಸೂಚನೆ ನೀಡಿದೆ. ನಾಮಕರಣ ಪ್ರಶ್ನಿಸಿ ದಾವಣಗೆರೆ ವಕೀಲ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಅರ್ಜಿ ಸಲ್ಲಿಸಿದ್ದರು.

# ಲಲಿತ್ ಮೋದಿ ಸಲ್ಲಿಸಿದ್ದ ಅರ್ಜಿ ತಿರಸ್ಕರಿಸಿದ ಸುಪ್ರೀಂಕೋರ್ಟ್



ನವದೆಹಲಿ: ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ಉಲ್ಲಂಘಿಸಿದ್ದಕ್ಕಾಗಿ ಜಾರಿ ನಿರ್ದೇಶನಾಲಯ ವಿಧಿಸಿರುವ 10.65ಕೋಟಿ ರೂ. ದಂಡ ಪಾವತಿಸಲು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಗೆ ನಿರ್ದೇಶನ ನೀಡಬೇಕು ಎಂದು ಕೋರಿ ಮಾಜಿ ಕ್ರಿಕೆಟ್ ಆಡಳಿತಾಧಿಕಾರಿ ಮತ್ತು ಐಪಿಎಲ್ ಸಂಸ್ಥಾಪಕ ಲಲಿತ್ ಮೋದಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ನ್ಯಾಮೂ.ಗಳಾದ ಪಿ.ಎಸ್. ನರಸಿಂಹ ಮತ್ತು ಆರ್. ಮಹಾದೇವನ್ ಒಳಗೊಂಡ ಪೀಠ, ಲಲಿತ್‌ಮೋದಿ ಅವರ ಮನವಿ ಪರಿಗಣಿಸಲು ನಿರಾಕರಿಸಿ, ಕಾನೂನಿನ ಪ್ರಕಾರ ಲಭ್ಯವಿರುವ ನಾಗರಿಕ ಪರಿಹಾರಗಳನ್ನು ಪಡೆಯಲು ಅರ್ಹರು ಎಂದು ಹೇಳಿತು.

# ತ್ರಿಭಾಷಾ ಸೂತ್ರಕ್ಕೆ ಮಹಾರಾಷ್ಟ್ರದಲ್ಲಿ ಹಿನ್ನಡೆ




ಮಹಾರಾಷ್ಟ್ರ : ಹಿಂದಿಯನ್ನು ಮೂರನೇ ಭಾಷೆಯಾಗಿ ಕಡ್ಡಾಯವಾಗಿ ಕಲಿಸಲು ಸೂಚಿಸುವ ತ್ರಿಭಾಷಾ ಸೂತ್ರಕ್ಕೆ ಮಹಾರಾಷ್ಟ್ರದಲ್ಲಿ ಹಿನ್ನಡೆಯಾಗಿದೆ. ರಾಜ್ಯದ ಶಾಲೆಗಳಲ್ಲಿ 1 ರಿಂದ 5ನೇ ತರಗತಿ ಮಕ್ಕಳಿಗೆ ಹಿಂದಿ ಕಲಿಸಬೇಕು ಎಂಬ ಆದೇಶಕ್ಕೆ ತೀವ್ರ ವಿರೋಧ ವ್ಯಕ್ತವಾಗಿದ್ದು, ಇದೀಗ ಸರ್ಕಾರ ತನ್ನ ಆದೇಶವನ್ನೇ ವಾಪಸ್ ಪಡೆದಿದೆ. ಈ ಬಗ್ಗೆ ಮಾತನಾಡಿದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಭಾಷಾ ನೀತಿಯ ಮುಂದಿನ ಬೆಳವಣಿಗೆ ಮತ್ತು ಅನುಷ್ಠಾನವನ್ನು ನಿರ್ಧರಿಸಲು ಶಿಕ್ಷಣ ತಜ್ಞ ನರೇಂದ್ರ ಜಾಧವ್ ಅವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸುವುದಾಗಿ ಘೋಷಿಸಿದರು. ವಿರೋಧ ಉಂಟಾದ ಬಳಿಕ, ಆದೇಶ ತಿದ್ದುಪಡಿ ಮಾಡಿ ಹಿಂದಿಯನ್ನು ಐಚ್ಛಿಕ ಭಾಷೆಯನ್ನಾಗಿ ಮಾಡಿದರು.

# ನಕ್ಸಲರೊಂದಿಗೆ ಯಾವುದೇ ಶಾಂತಿ ಸಂಧಾನದ ಮಾತುಕತೆ ಇಲ್ಲ



ಹೈದರಾಬಾದ್: "ನಕ್ಸಲರೊಂದಿಗೆ ಯಾವುದೇ ಶಾಂತಿ ಸಂಧಾನದ ಮಾತುಕತೆ ಇಲ್ಲ. ನಿಷೇಧಿತ ಸಂಘಟನೆಯ ಕಾರ್ಯಕರ್ತರು ಶಸ್ತ್ರಾಸ್ತ್ರಗಳನ್ನು ತ್ಯಜಿಸಬೇಕು. ಪೊಲೀಸರ ಮುಂದೆ ಶರಣಾಗಬೇಕು. ಸಮಾಜದ ಮುಖ್ಯವಾಹಿನಿಗೆ ಸೇರಬೇಕು" ಎಂದು ಕೇಂದ್ರ ಗೃಹ ಸಚಿವ ಅಮಿತ್‌ಶಾ ಅವರು ಖಡಕ್ ಎಚ್ಚರಿಕೆ ರವಾನಿಸಿದ್ದಾರೆ. ತೆಲಂಗಾಣದ ನಿಜಾಮಾಬಾದ್‌ನಲ್ಲಿ ಅರಿಶಿನ ಮಂಡಳಿಯ ರಾಷ್ಟ್ರೀಯ ಪ್ರಧಾನ ಕಚೇರಿ ಉದ್ಘಾಟಿಸಿದ ನಂತರ ಮಾತನಾಡಿದ ಅವರು, "ಮಾವೋವಾದಿಗಳೊಂದಿಗೆ ಚರ್ಚೆ ನಡೆಸುವಂತೆ ಕಾಂಗ್ರೆಸ್ ಹೇಳುತ್ತಿದೆ. ಶಸ್ತ್ರಾಸ್ತ್ರಗಳನ್ನು ಹೊಂದಿರುವ ಜನರೊಂದಿಗೆ ಯಾವುದೇ ಮಾತುಕತೆಯ ಅಗತ್ಯವಿಲ್ಲ ಎಂದರು.

# ಮೋದಿಯಿಂದ ಕಲಬುರಗಿ ಜೋಳದ ರೊಟ್ಟಿ ಪ್ರಸ್ತಾಪ



ನವದೆಹಲಿ: ಉತ್ತರ ಕರ್ನಾಟಕದ ವಿಶೇಷ ಆಹಾರವಾದ 'ಜೋಳದ ರೊಟ್ಟಿ'ಗೆ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಶಂಸೆ ಸಿಕ್ಕಿದೆ. ಅದರಲ್ಲೂ ಕಲಬುರಗಿಯ ಖಡಕ್ ರೊಟ್ಟಿ ಮತ್ತು ಅದನ್ನು ತಯಾರಿಸಿ ಬ್ರ್ಯಾಂಡ್ ಮಾಡಿರುವ ಮಹಿಳೆಯರ ಪರಿಶ್ರಮವನ್ನು ಅವರು ಹೊಗಳಿದರು. ತಮ್ಮ ಮನ್ ಕಿ ಬಾತ್‌ನಲ್ಲಿ ಕಲಬುರಗಿಯ ಖಡಕ್ ಜೋಳದ ರೊಟ್ಟಿಯ ಬಗ್ಗೆ ಪ್ರಸ್ತಾಪಿಸಿರುವ ಅವರು, "ಅಲ್ಲಿನ ಮಹಿಳೆಯರು ಜೋಳದ ರೊಟ್ಟಿ ಬ್ರಾಂಡ್ ಆಗಿ ಪರಿವರ್ತಿಸಿದ್ದಾರೆ. ಸಹಕಾರಿ ಸಂಸ್ಥೆಯ ಮೂಲಕ ಪ್ರತಿದಿನ 3 ಸಾವಿರಕ್ಕೂ ಅಧಿಕ ರೊಟ್ಟಿಗಳನ್ನು ಉತ್ಪಾದಿಸುತ್ತಾರೆ. ಬೆಂಗಳೂರಿನಲ್ಲಿ ಕೇಂದ್ರ ಮತ್ತು ಆನ್‌ಲೈನ್ ಆಹಾರ ವೇದಿಕೆಗಳ ಮೂಲಕ ಮಾರಾಟವಾಗುತ್ತಿದೆ" ಎಂದು ಹೇಳಿದರು.

# ಚುನಾವಣೆಯಲ್ಲಿ ಮೊಬೈಲ್ ಅಪ್ಲಿಕೇಶನ್ ಮೂಲಕ ಮತದಾನ!




ಬಿಹಾರ: ಭಾರತದ ಚುನಾವಣಾ ಪ್ರಕ್ರಿಯೆಯಲ್ಲಿ ಮಹತ್ವದ ನಾವೀನ್ಯತೆಯೊಂದಕ್ಕೆ ಬಿಹಾರ ಚುನಾವಣಾ ಆಯೋಗ ಕಾರಣವಾಗುತ್ತಿದೆ. ಮೂರು ಜಿಲ್ಲೆಗಳ ಆರು ಪುರಸಭೆಗಳಿಗೆ ನಡೆದ ಮತದಾನದಲ್ಲಿ ಬಿಹಾರ ಮೊಬೈಲ್ ಫೋನ್ ಮೂಲಕ ಮತದಾನ ನಡೆಸಿದ ದೇಶದ ಮೊದಲ ರಾಜ್ಯವಾಯಿತು. ಪಾಟ್ನಾ, ಪೂರ್ವ ಚಂಪಾರಣ್, ರೋಹ್ತಾಸ್, ಬಕ್ಸಾರ್, ಬಂಕಾ ಮತ್ತು ಸರನ್ ಜಿಲ್ಲೆಗಳ 6 ಪುರಸಭೆ ಸಂಸ್ಥೆಗಳ 45 ಸ್ಥಾನಗಳಿಗೆ ಉಪಚುನಾವಣೆಗಳಿಗೆ ಮತದಾನ ನಡೆಯಿತು. ರಾಜ್ಯ ಚುನಾವಣಾ ಆಯುಕ್ತ ಡಾ. ದೀಪಕ್ ಪ್ರಸಾದ್, ರಾಜ್ಯವು ದೇಶದಲ್ಲಿ ಮೊದಲ ಬಾರಿಗೆ ಇ-ಮತದಾನ ವಿಧಾನವನ್ನು ಬಳಸಿದೆ.



ಕರಾವಳಿ ತರಂಗಿಣಿ
# ಕಲಾ ತರಂಗಿಣಿ



## ಜುಲೈ 4ರಂದು 'ಕ್ಯಾಪಿಟಲ್ ಸಿಟಿ' ಬಿಡುಗಡೆ

'ಇನ್ಫಿನಿಟಿ ಕ್ರಿಯೇಷನ್ಸ್' ಸಂಸ್ಥೆ ಲಾಂಛನದಲ್ಲಿ ನಿರ್ಮಾಣವಾಗಿರುವ, 'ಅಪ್ಪು ಪಪ್ಪು', 'ಮಸ್ತ್ ಮಜಾ ಮಾಡಿ', 'ನಂದ' ಸೂಪರ್ ಹಿಟ್ ಚಿತ್ರಗಳ ನಿರ್ದೇಶಕ ಆರ್ ಅನಂತ ರಾಜು ನಿರ್ದೇಶನದ ಹಾಗೂ 'ಜಿಂದಗಿ' ಚಿತ್ರದ ನಂತರ ರಾಜೀವ್ ರೆಡ್ಡಿ ನಾಯಕನಾಗಿ ನಟಿಸಿರುವ 'ಕ್ಯಾಪಿಟಲ್ ಸಿಟಿ' ಚಿತ್ರ ಇದೇ ಜುಲೈ 4ರಂದು ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು. ಮೊದಲು ಮಾತನಾಡಿದ ಖ್ಯಾತ ನಟ ರವಿಶಂಕರ್, ಈ ಚಿತ್ರದ ಜರ್ನಿ ಚೆನ್ನಾಗಿತ್ತು. ಚಿತ್ರದ ತುಣುಕುಗಳನ್ನು ನೋಡಿದಾಗ ನಾಯಕ ರಾಜೀವ್ ರೆಡ್ಡಿ ಅವರ ಅಭಿನಯ ಬಹಳ ಇಷ್ಟವಾಯಿತು. ನನ್ನದು ಈ ಚಿತ್ರದಲ್ಲಿ ವಿಭಿನ್ನ ಪಾತ್ರ. ಜುಲೈ 4ರಂದು ಬಿಡುಗಡೆಯಾಗುತ್ತಿರುವ ಈ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು. ಇದು ನನ್ನ ನಿರ್ದೇಶನದ 11ನೇ ಚಿತ್ರ. ರವಿಶಂಕರ್ ಅವರು ಬಹಳ ವರ್ಷಗಳ ಪರಿಚಯ. ಆದರೆ ಅವರ ಜೊತೆಗೆ ಕೆಲಸ ಮಾಡಿರುವುದು ಇದೇ ಮೊದಲು. ಚಿತ್ರ ಅಂದುಕೊಂಡ ಹಾಗೆ ಮೂಡಿಬರಲು ನಿರ್ಮಾಪಕರು ಹಾಗೂ ಇಡೀ ತಂಡದ ಸಹಕಾರವೇ ಕಾರಣ. ಇದೊಂದು ಬೆಂಗಳೂರು ಭೂಗತ ಜಗತ್ತಿನ ಸುತ್ತ ನಡೆಯುವ ಕಥೆ. 90 ರ ಕಾಲಘಟ್ಟದ ಕಥೆಯೂ ಹೌದು. ತೊಂದರೆಗೀಡಾದ ನಾಯಕ ಹೇಗೆ ತನ್ನ ಕಷ್ಟವನ್ನು ನಿಭಾಯಿಸಿಕೊಂಡು ಬರುತ್ತಾನೆ ಎನ್ನುವುದೇ ಪ್ರಮುಖ ಕಥಾಹಂದರ. ರಾಜೀವ್ ರೆಡ್ಡಿ ಈ ಚಿತ್ರದ ನಾಯಕನಾಗಿ ನಟಿಸಿದ್ದು, ಪ್ರೇರಣ ನಾಯಕಿಯಾಗಿ ಅಭಿನಯಿಸಿದ್ದಾರೆ. ಸುಮನ್, ರವಿಶಂಕರ್, ಶರತ್ ಲೋಹಿತಾಶ್ವ, ಕೆ.ಎಸ್. ಶ್ರೀಧರ್ ಮುಂತಾದ ಹಿರಿಯ ನಟರು ಈ ಚಿತ್ರದಲ್ಲಿದ್ದಾರೆ. ಕರ್ನಲ್ ರಾಜೇಂದ್ರ ಅವರು ಸೇರಿದಂತೆ ಚಿತ್ರದ ಕೆಲವು ನಿರ್ಮಾಪಕರು ಸಹ ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ಜುಲೈ 4ರಂದು ನಮ್ಮ ಚಿತ್ರ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಇದೊಂದು ರಿವೆಂಜ್ ಸ್ಟೋರಿ ಎಂದು ನಿರ್ದೇಶಕ ಅನಂತರಾಜು ತಿಳಿಸಿದರು.



## "ರಂಗಿತರಂಗ" ಮತ್ತೆ ತೆರೆಗೆ

2015ರ ಜುಲೈ 3ರಂದು ತೆರೆಕಂಡು, ಕನ್ನಡ ಚಿತ್ರರಂಗದಲ್ಲಿ ಹೊಸ ಇತಿಹಾಸ ಸೃಷ್ಟಿಸಿದ ಎಚ್.ಕೆ. ಪ್ರಕಾಶ್ ನಿರ್ಮಾಣದ, ಅನೂಪ್ ಭಂಡಾರಿ ನಿರ್ದೇಶನದ ಬ್ಲಾಕ್‌ಬಸ್ಟರ್ ಚಲನಚಿತ್ರ 'ರಂಗಿತರಂಗ', ಈಗ ಹತ್ತು ವರ್ಷಗಳ ನಂತರ ಮತ್ತೆ ತೆರೆಗೆ ಬರಲು ಸಜ್ಜಾಗಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ, ಚಿತ್ರತಂಡದ ಸದಸ್ಯರು ತಮ್ಮ ಅನುಭವಗಳನ್ನು ಹಂಚಿಕೊಂಡು ಹಳೆಯ ನೆನಪುಗಳನ್ನು ಮೆಲುಕು ಹಾಕಿದರು. "ನಾನು ನಿರೂಪ್ ನಟಿಸಿದ್ದ ಒಂದು ಟೆಲಿಫಿಲಂ ನೋಡಿ ಮೆಚ್ಚಿಕೊಂಡಿದ್ದೆ. ಅವರೊಂದಿಗೆ ಸಿನಿಮಾ ಮಾಡಬೇಕೆಂದು ನಿರೂಪ್ ಅವರ ತಂದೆ ಸುಧಾಕರ್ ಭಂಡಾರಿ ಅವರನ್ನು ಸಂಪರ್ಕಿಸಿದಾಗ, ಅನೂಪ್ ಭಂಡಾರಿ ನಿರ್ದೇಶನದ ಸಿನಿಮಾದ ಪ್ರೀ-ಪ್ರೊಡಕ್ಷನ್‌ನಲ್ಲಿ ತೊಡಗಿಸಿಕೊಂಡಿದ್ದರು. ಆಗ ಅನೂಪ್ ಅವರ ಬಳಿ ಕಥೆ ಕೇಳಿದೆ. ಹಾಡುಗಳನ್ನು ಕೇಳಿದ ಕೂಡಲೇ ಈ ಸಿನಿಮಾ ನಾನೇ ಮಾಡಬೇಕು ಎಂದು ತೀರ್ಮಾನಿಸಿದೆ. ಆ ಚಿತ್ರವೇ 'ರಂಗಿತರಂಗ'. ಯಶಸ್ಸಿನ ಉತ್ತುಂಗಕ್ಕೇರಿ ಈಗ 10ನೇ ವಾರ್ಷಿಕೋತ್ಸವ ಆಚರಿಸುತ್ತಿರುವ ಈ ಚಿತ್ರದಿಂದಾಗಿ, ಹತ್ತು ವರ್ಷಗಳ ನಂತರವೂ ನನ್ನನ್ನು 'ರಂಗಿತರಂಗ' ಪ್ರಕಾಶ್ ಎಂದೇ ಗುರುತಿಸುತ್ತಾರೆ. ನಿಮ್ಮೆಲ್ಲರ ಪ್ರೋತ್ಸಾಹದೊಂದಿಗೆ, 2025ರ ಜುಲೈ 4ರಂದು 'ರಂಗಿತರಂಗ' ಚಿತ್ರವನ್ನು ಮರು-ಬಿಡುಗಡೆ ಮಾಡುತ್ತಿದ್ದೇವೆ," ಎಂದು ನಿರ್ಮಾಪಕ ಎಚ್.ಕೆ. ಪ್ರಕಾಶ್ ಹೇಳಿದರು. "ವಿದೇಶದಲ್ಲಿ ಉದ್ಯೋಗದಲ್ಲಿದ್ದ ನಾನು ಹಾಲಿವುಡ್ ಸ್ಟಾರ್ ರಸೆಲ್ ಹಾರ್ವರ್ಡ್ ಅವರೊಂದಿಗೆ ಅಂತರರಾಷ್ಟ್ರೀಯ ಕಿರುಚಿತ್ರಗಳನ್ನು ಮಾಡಿದ್ದೆ. 'ರಂಗಿತರಂಗ'ದ ಪ್ರೀ-ಪ್ರೊಡಕ್ಷನ್ ಕಾರ್ಯದಲ್ಲಿರುವಾಗ, ಈ ಚಿತ್ರ ನಾನೇ ಮಾಡಬೇಕೆಂದು ಎಚ್.ಕೆ. ಪ್ರಕಾಶ್ ಅವರ ಆಸೆಯನ್ನು ನೋಡಿ ಅವರ ಉತ್ಸಾಹಕ್ಕೆ ಕೈಜೋಡಿಸಿದೆ. ನಿರೂಪ್ ಭಂಡಾರಿ, ರಾಧಿಕಾ ಚೇತನ್, ಅವಂತಿಕಾ ಶೆಟ್ಟಿ, ಅರವಿಂದ್ ಎಲ್ಲರ ಸಂಘಟಿತ ಶ್ರಮವೇ ಚಿತ್ರ ಉತ್ತಮವಾಗಿ ಬರಲು ಕಾರಣ ಎಂದರು.



## ಮಕ್ಕಳ ಚಿತ್ರವಾಗಿ ತೆರೆಗೆ ಬರುತ್ತಿದೆ 90ರ ದಶಕದ ಕಥೆ

ಬಹುತೇಕ ಉತ್ತರ ಕರ್ನಾಟಕದ ಪ್ರತಿಭೆಗಳೇ ಸೇರಿ ನಿರ್ಮಿಸಿರುವ ಮಕ್ಕಳ ಚಿತ್ರ 'ಲಕ್ಷ್ಯ' ತೆರೆಗೆ ಬರಲು ಸಿದ್ದವಾಗಿದೆ. ಈಗಾಗಲೇ ಬಹುತೇಕ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನು ಪೂರ್ಣಗೊಳಿಸಿರುವ 'ಲಕ್ಷ್ಯ' ಚಿತ್ರತಂಡ, ಇತ್ತೀಚೆಗೆ ಚಿತ್ರದ ಟ್ರೇಲರ್ ಮತ್ತು ಹಾಡುಗಳನ್ನು ಬಿಡುಗಡೆ ಮಾಡುವ ಮೂಲಕ ಚಿತ್ರದ ಪ್ರಚಾರ ಕಾರ್ಯಗಳಿಗೆ ಚಾಲನೆ ನೀಡಿದೆ. 1990ರ ದಶಕದಲ್ಲಿ ಉತ್ತರ ಕರ್ನಾಟಕದಲ್ಲಿ ನಡೆದ ನೈಜ ಘಟನೆಯನ್ನು ಸ್ಫೂರ್ತಿಯಾಗಿ ತೆಗೆದುಕೊಂಡು ತಯಾರಾದ 'ಲಕ್ಷ್ಯ' ಚಿತ್ರಕ್ಕೆ ಉತ್ತರ ಕರ್ನಾಟಕ ಮೂಲದ ಅರ್ಜುನ ಪಿ. ಡೊಣೂರ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಇತ್ತೀಚೆಗೆ 'ಲಕ್ಷ್ಯ' ಚಿತ್ರದ ಟ್ರೇಲರ್ ಮತ್ತು ಹಾಡುಗಳನ್ನು ಚಿತ್ರತಂಡ ಬಿಡುಗಡೆ ಮಾಡಿದೆ. ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ, ಲಹರಿ ವೇಲು, ಸುನೀಲ್ ಸೇರಿದಂತೆ ಹಲವು ಗಣ್ಯರ ಸಮ್ಮುಖದಲ್ಲಿ 'ಲಕ್ಷ್ಯ' ಚಿತ್ರದ ಟ್ರೇಲರ್ ಮತ್ತು ಹಾಡುಗಳು ಬಿಡುಗಡೆಯಾದವು. ಬಳಿಕ ಮಾತನಾಡಿದ 'ಲಕ್ಷ್ಯ' ಚಿತ್ರದ ನಿರ್ಮಾಪಕ ಮತ್ತು ನಿರ್ದೇಶಕ ಅರ್ಜುನ ಪಿ.ಡೊಣೂರ 'ಇದೊಂದು ಮಕ್ಕಳ ಚಿತ್ರ. ಕನ್ನಡದಲ್ಲಿ 'ಲಕ್ಷ್ಯ' ಎಂದರೆ ಗಮನ ಕೊಡುವುದು ಎಂಬ ಅರ್ಥವಿದೆ. ಇದು ಮಕ್ಕಳ 'ಲಕ್ಷ್ಯ'ದ ಕುರಿತು ಮಾಡಲಾದ ಚಿತ್ರ. ಮಕ್ಕಳು ಹೇಗೆ 'ಲಕ್ಷ್ಯ' ಕೊಡುತ್ತಾರೆ, ಅದರಿಂದ ಏನಾಗುತ್ತದೆ ಎಂಬುದೇ ಈ ಚಿತ್ರದ ಕಥಾಹಂದರ ಎಂದರು.



## ಈ ವಾರ ತೆರೆಗೆ ರಕ್ಷಿತ್ ಕುಮಾರ್ ನಿರ್ದೇಶನದ ಜಂಗಲ್ ಮಂಗಲ್

ಸ್ಯಾಂಡಲ್‌ವುಡ್‌ನಲ್ಲಿ ಭಿನ್ನ ವಿಭಿನ್ನ ಕಂಟೆಂಟಿಗೆ ಬೆಂಬಲ ಸಿಕ್ಕೇ ಸಿಗುತ್ತೆ. ಹಾಗೆ ಖ್ಯಾತನಾಮ ನಿರ್ದೇಶಕರಿಂದ ಮೆಚ್ಚುಗೆ ಪಡೆದ ಚಿತ್ರವೇ "ಜಂಗಲ್ ಮಂಗಲ್". ಇನ್ನೇನು ಇದೇ ಜುಲೈ 4ರಂದು ರಾಜ್ಯಾದ್ಯಂತ ಈ ಸಿನಿಮಾ ತೆರೆಗೆ ಬರಲಿದೆ. ಲೈಟ್ ಹಾರ್ಟೆಡ್ ಥ್ರಿಲ್ಲರ್ ಶೈಲಿಯಲ್ಲಿ ಈ "ಜಂಗಲ್ ಮಂಗಲ್" ಸಿನಿಮಾವನ್ನು ನಿರ್ದೇಶಕ ರಕ್ಷಿತ್ ಕುಮಾರ್ ಕಟ್ಟಿಕೊಟ್ಟಿದ್ದಾರೆ. ಕಳೆದ ಎಂಟತ್ತು ವರ್ಷಗಳಿಂದ ಸಿನಿಮಾ, ಸೀರಿಯಲ್ ಹೀಗೆ ಬಣ್ಣದ ಲೋಕದಲ್ಲಿ ಸಕ್ರಿಯರಾಗಿ ಇದೀಗ ಸ್ವತಂತ್ರ ನಿರ್ದೇಶಕರಾಗಿ ಆಗಮಿಸುತ್ತಿದ್ದಾರೆ. ಹಾಗಾದರೆ ಏನಿದು ?ಜಂಗಲ್ ಮಂಗಲ್'? ಯುವ ಜೋಡಿಯ ಸುತ್ತ ಒಂದು ದಿನದ ಅವಧಿಯಲ್ಲಿ ನಡೆಯುವ ಲೈಟ್ ಹಾರ್ಟೆಡ್ ಥ್ರಿಲ್ಲರ್ ಚಿತ್ರವಿದು. ಯಾವುದೋ ಒಂದು ಕಾರಣಕ್ಕೆ ಕಾಡಿಗೆ ಹೋಗುವ ಜೋಡಿಗೆ, ಎದುರಾಗುವ ಸಮಸ್ಯೆಗಳೇ ಈ ಚಿತ್ರದ ಹೈಲೈಟ್. ಇನ್ನೊಂದು ಮಜವೆಂದರೆ ಇದು ನೈಜ ಪಾತ್ರಗಳನ್ನು ಆಧರಿಸಿ ಜೋಡಿಸಿದ ಕಾಲ್ಪನಿಕ ಕಥೆಯಂತೆ. ಹೀಗಂತ ಸ್ವತಃ ನಿರ್ದೇಶಕ ರಕ್ಷಿತ್ ಕುಮಾರ್ ಹೇಳಿದ್ದಾರೆ. ದುಷ್ಟಶಕ್ತಿಯೊಂದನ್ನು ನಾಶ ಮಾಡುವ ತಾಕತ್ತು ಪ್ರಕೃತಿಗಿದೆ ಅನ್ನೋದನ್ನ ಈ ಸಿನಿಮಾ ಮೂಲಕ ಹೇಳುವ ಪ್ರಯತ್ನ ಈ ಚಿತ್ರದಲ್ಲಾಗಿದೆ ಎನ್ನುವ ನಿರ್ದೇಶಕರು, "ಇದರಲ್ಲಿ ಬರುವ ಪಾತ್ರಗಳು ಮತ್ತು ಘಟನೆಗಳು ನೈಜ. ಅದನ್ನೆಲ್ಲ ಒಂದೆಡೆ ಸೇರಿ ಮಾಡಿದ ಕಥೆ ಕಾಲ್ಪನಿಕ. ತೆರೆ ಮೇಲೆ ಕಾಣುವ ಪಾತ್ರಗಳು ಕರಾವಳಿ ಭಾಗಕ್ಕೆ ಹತ್ತಿರವಾದವು. ಎಷ್ಟೋ ಯುವ ಜೋಡಿಗಳು ಕಾಡಿನಲ್ಲಿ ಹಳ್ಳಿಗರ ಕೈಗೆ ಸಿಕ್ಕಿಬಿದ್ದ ಉದಾಹರಣೆಗಳಿವೆ. ಉತ್ತರ ಭಾರತದ ಕಡೆಗೆ ಹೀಗೆ ಸಿಕ್ಕವರನ್ನು "ಜಂಗಲ್ ಮೇ ಮಂಗಲ್" ಅಂತ ಕರೀತಾರೆ" ಎನ್ನುತ್ತಾರೆ.



## ಗೋಲ್ಡನ್ ಸ್ಟಾರ್ ಗಣೇಶ್‌ಗೆ ಚೇತನ್ ಕುಮಾರ್ ನಿರ್ದೇಶನ

ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ಗೋಲ್ಡನ್ ಸ್ಟಾರ್ ಗಣೇಶ್ ಅವರಿಗೆ ಹುಟ್ಟುಹಬ್ಬದ ಸಂಭ್ರಮ. ಈ ಸಂತಸದ ಸಮಯದಲ್ಲಿ ನೂತನ ಚಿತ್ರದ ಘೋಷಣೆಯಾಗಿದೆ. ಎಸ್ ವಿಸಿ ಫಿಲಂಸ್ ಲಾಂಛನದಲ್ಲಿ ಎಂ.ಮುನೇಗೌಡ ಅವರು ನಿರ್ಮಿಸುತ್ತಿರುವ 'ಪ್ರೊಡಕ್ಷನ್ ನಂ3' ಚಿತ್ರವನ್ನು 'ಬಹದ್ದೂರ್', 'ಭರ್ಜರಿ', 'ಭರಾಟೆ', 'ಜೇಮ್ಸ್' ನಂತಹ ಸೂಪರ್ ಹಿಟ್ ಚಿತ್ರಗಳನ್ನು ನಿರ್ದೇಶಿಸಿರುವ ಚೇತನ್ ಕುಮಾರ್ ನಿರ್ದೇಶಿಸುತ್ತಿದ್ದಾರೆ. ಗೋಲ್ಡನ್ ಸ್ಟಾರ್ ಗಣೇಶ್ ನಾಯಕರಾಗಿ ನಟಿಸುತ್ತಿದ್ದಾರೆ. ಗಣೇಶ್ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ತಮ್ಮ ಸಂಸ್ಥೆಯ ಮೂರನೇ ಚಿತ್ರವನ್ನು ಘೋಷಿಸಿರುವ ನಿರ್ಮಾಪಕ ಎಂ. ಮುನೇಗೌಡ ಅವರು ಗಣೇಶ್ ಅವರಿಗೆ ಹುಟ್ಟುಹಬ್ಬದ ಶುಭಾಶಯ ತಿಳಿಸಿದ್ದಾರೆ. ಈ ಹಿಂದೆ 'ಭುವನಂ ಗಗನಂ' ನಿರ್ಮಿಸಿದ್ದ ಎಂ.ಮುನೇಗೌಡ ಅವರು ಪ್ರಸ್ತುತ 'ಅಯೋಗ್ಯ 2' ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಈಗ 3ನೇ ಚಿತ್ರದ ನಿರ್ಮಾಣಕ್ಕೆ ಮುಂದಾಗಿದ್ದಾರೆ. ಗೋಲ್ಡನ್ ಸ್ಟಾರ್ ಗಣೇಶ್ ಹಾಗೂ ಚೇತನ್ ಕುಮಾರ್ ಕಾಂಬಿನೇಶನ್‌ನಲ್ಲಿ ಮೂಡಿಬರುತ್ತಿರುವ ಮೊದಲ ಚಿತ್ರವಿದು.



## ಅಶ್ವ ಫಿಲಂಸ್ ನಿರ್ಮಾಣದ ಚಿತ್ರ 'ಹಚ್ಚೆ'

ಅಶ್ವ ಫಿಲಂಸ್ ಲಾಂಛನದಲ್ಲಿ ಯಶೋಧರ ಅವರು ಕಥೆ, ಚಿತ್ರಕಥೆ ಸಂಭಾಷಣೆ ಬರೆದು ನಿರ್ದೇಶಿಸಿರುವ ಹಾಗೂ ಅಭಿಮನ್ಯು ನಾಯಕನಾಗಿ ನಟಿಸಿರುವ ವಿಭಿನ್ನ ಕಥೆ ಹೊಂದಿರುವ ನೂತನ ಚಿತ್ರದ ಶೀರ್ಷಿಕೆ ಇತ್ತೀಚೆಗೆ ಅನಾವರಣಗೊಂಡಿದೆ. ಚಿತ್ರಕ್ಕೆ "ಹಚ್ಚೆ" ಎಂದು ಹೆಸರಿಡಲಾಗಿದೆ. ಅಭಿಮನ್ಯು ಅವರಿಗೆ ನಾಯಕಿಯಾಗಿ ಅದ್ಯಾಪ್ರಿಯಾ ನಟಿಸಿದ್ದಾರೆ. ಅನುಪ್ರೇಮ, ಗುರುರಾಜ್ ಹೊಸಕೋಟೆ, ದುಷ್ಯಂತ್, ಶ್ರೀಮಂತ್ ಸುರೇಶ್, ಚಂದ್ರು ಬಂಡೆ ಮುಂತಾದವರು ತಾರಾಬಳಗದಲ್ಲಿದ್ದಾರೆ. "ಹಚ್ಚೆ" ಚಿತ್ರಕ್ಕೆ ಇತಿಹಾಸದ ಶಕ್ತಿ ಎಂಬ ಅಡಿಬರಹವಿದೆ. ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಕರ್ನಾಟಕದ ಸುಂದರ ಸ್ಥಳಗಳಲ್ಲಿ 50 ದಿನಗಳ ಚಿತ್ರೀಕರಣ ನಡೆದಿದೆ. ವಿವೇಕ್ ಚಕ್ರ ವರ್ತಿ ಸಂಗೀತ ನಿರ್ದೇಶನ, ಸುರೇಶ್ ಆರ್ಮುಗಂ ಸಂಕಲನ ಹಾಗೂ ಯಾಸಿನ್ ಅವರ ಛಾಯಾಗ್ರಹಣವಿರುವ ಈ ಚಿತ್ರದ ಟೀಸರ್ ಹಾಗೂ ಹಾಡುಗಳು ಸದ್ಯದಲ್ಲೇ ಬಿಡುಗಡೆಯಾಗಲಿದೆ. ಈ ಮೂಲಕ ಚಿತ್ರತಂಡ ಪ್ರಚಾರ ಕಾರ್ಯ ಆರಂಭಿಸಲಿದೆ.



## ದಶಕದ ಬಳಿಕ ನಿರ್ದೇಶನಕ್ಕೆ ತಮಿಳು ನಟ ಎಸ್‌ಜೆ ಸೂರ್ಯ

ಹತ್ತು ವರ್ಷಗಳ ನಂತರ, ತಮಿಳಿನ ಹೆಸರಾಂತ ನಿರ್ದೇಶಕ ಹಾಗೂ ನಟ ಎಸ್.ಜೆ. ಸೂರ್ಯ ಮತ್ತೆ ಡೈರೆಕ್ಟರ್ ಟೋಪಿ ತೊಟ್ಟು ಬಹುಮುಖ್ಯವಾದ ಹೊಸ ಸಿನಿಮಾದ ಮೂಲಕ ವಾಪಸ್ಸಾಗುತ್ತಿದ್ದಾರೆ. ಶ್ರೀ ಗೋಕುಲಂ ಮೂವೀಸ್ ಬ್ಯಾನರ್ ಅಡಿಯಲ್ಲಿ, ಗೋಕುಲಂ ಗೋಪಾಲನ್ ಮತ್ತು ಅಂಜೆಲ್ ಸ್ಟುಡಿಯೋಸ್ (ಎಸ್. ಜೆ. ಸೂರ್ಯ ಒಡೆತನದ) ಸಹಯೋಗದಲ್ಲಿ ಚಿತ್ರ ನಿರ್ಮಾಣವಾಗುತ್ತಿದೆ. ಚಿತ್ರಕ್ಕೆ 'ಕಿಲ್ಲರ್' ಎಂದು ಶೀರ್ಷಿಕೆ ಇಡಲಾಗಿದೆ. "ವಾಲಿ", "ಖುಷಿ" ಮತ್ತು "ನ್ಯೂ" ಎಂಬ ಯಶಸ್ವಿ ಚಿತ್ರಗಳನ್ನು ನಿರ್ದೇಶಿಸಿದ ಎಸ್.ಜೆ. ಸೂರ್ಯ ಈ ಚಿತ್ರದಲ್ಲಿ ನಾಯಕನಾಗಿ ಕಾಣಿಸಿಕೊಳ್ಳುವ ಜೊತೆಗೆ ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯ ಜವಾಬ್ದಾರಿಯನ್ನೂ ಹೊತ್ತಿದ್ದಾರೆ. ವಿ.ಸಿ. ಪ್ರವೀಣ್ ಮತ್ತು ಬೈಜು ಗೋಪಾಲನ್ ಈ ಚಿತ್ರದ ಸಹ-ನಿರ್ಮಾಪಕರಾಗಿದ್ದಾರೆ. ಕೃಷ್ಣಮೂರ್ತಿ ಕಾರ್ಯನಿರ್ವಾಹಕ ನಿರ್ಮಾಪಕರಾಗಿದ್ದಾರೆ. 'ಕಿಲ್ಲರ್' ಸಿನಿಮಾ ದೊಡ್ಡ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿದ್ದು, ತಮಿಳು, ತೆಲುಗು, ಕನ್ನಡ, ಮಲಯಾಳಂ ಮತ್ತು ಹಿಂದಿ ಭಾಷೆಗಳಲ್ಲಿ ಬಿಡುಗಡೆಗೊಳ್ಳಲಿದೆ.




## ಮುಂಗಾರು ಮಳೆಯಲ್ಲಿ ಪೃಥ್ವಿ-ಕಾವ್ಯ ಮಿಂಚು

ರಾಕಿಂಗ್ ಸ್ಟಾರ್ ಯಶ್ ಅವರ ತಾಯಿ ಪುಷ್ಪಾಅರುಣ್ ಕುಮಾರ್ ನಿರ್ಮಾಣದ ಮೊದಲ ಸಿನಿಮಾ ಕೊತ್ತಲವಾಡಿ ಬಿಡುಗಡೆಗೆ ಸಿದ್ಧವಾಗಿದೆ. ಇದೀಗ ತಮ್ಮ ಮೊದಲ ಸಿನಿಮಾದ ಪ್ರಚಾರ ಕಾರ್ಯಕ್ಕೆ ಮುಂದಾಗಿದ್ದಾರೆ. ಹೀಗಾಗಿ ಅಣ್ಣಾವ್ರ ಆಶೀರ್ವಾದ ಪಡೆಯಲು ಡಾ.ರಾಜ್ ಸ್ಮಾರಕಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ್ದಾರೆ. ಪ್ರಚಾರದ ಅಂಗವಾಗಿ ಇಂದು ಕೊತ್ತಲವಾಡಿ ಮೊದಲ ಹಾಡು ಅನಾವರಣಗೊಂಡಿದೆ. MTR ಮ್ಯೂಸಿಕ್ ಯೂಟ್ಯೂಬ್‌ನಲ್ಲಿ ಮುಂಗಾರು ಮಳೆಯೆಂಬ ವಿಡಿಯೋ ಹಾಡು ಬಿಡುಗಡೆ ಮಾಡಲಾಗಿದೆ. ಪ್ರಮೋದ್ ಮರವಂತೆ ಸಾಹಿತ್ಯ ಬರೆದಿರುವ ಲವ್ ನಂಬರ್‌ಗೆ ನಿಶಾನ್ ರೈ, ಸುನಿಧಿ ಗಣೇಶ್ ಧ್ವನಿಯಾಗಿದ್ದು, ವಿಕಾಸ್ ವಸಿಷ್ಠ ಸಂಗೀತ ಒದಗಿಸಿದ್ದಾರೆ. ಪೃಥ್ವಿ ಅಂಬರ್ ಹಾಗೂ ಕಾವ್ಯಾ ಶೈವ ಹಾಡಿನಲ್ಲಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಆ.1ಕ್ಕೆ ಯಶ್ ತಾಯಿ ಪುಷ್ಪ ನಿರ್ಮಿಸಿರುವ ಚೊಚ್ಚಲ ಚಿತ್ರ ಕೊತ್ತಲವಾಡಿ ರಿಲೀಸ್ ಆಗುತ್ತಿದೆ.



## ಬೆಂಗಳೂರಿನಲ್ಲಿ ಸಿದ್ದಾರ್ಥ್ ನಟನೆಯ 3BHKಗೆ ಡಾಲಿ ಧನಂಜಯ್ ಸಾಥ್

ತಮಿಳು ಚಿತ್ರರಂಗದ ಪ್ರತಿಭಾನ್ವಿತ ನಟ ಸಿದ್ದಾರ್ಥ್ ನಟನೆಯ 3bhk ಸಿನಿಮಾ ಈಗಾಗಲೇ ಟ್ರೇಲರ್ ಮೂಲಕ ಕುತೂಹಲ ಹೆಚ್ಚಿಸಿದೆ. ಜುಲೈ 4ರಂದು ತೆರೆಗೆ ಬರ್ತಿರುವ ಈ ಚಿತ್ರದ ಪ್ರಚಾರ ಕಾರ್ಯ ಭರದಿಂದ ಸಾಗಿದೆ. ನಿನ್ನೆ ಚಿತ್ರತಂಡ ಬೆಂಗಳೂರಿನಲ್ಲಿ ಅದ್ಧೂರಿಯಾಗಿ ಪ್ರೀ ರಿಲೀಸ್ ಕಾರ್ಯಕ್ರಮ ಹಮ್ಮಿಕೊಂಡಿತ್ತು. ಕಾರ್ಯಕ್ರಮಕ್ಕೆ ನಟ ಡಾಲಿ ಧನಂಜಯ ಹಾಗೂ ನಿರ್ದೇಶಕ ಹೇಮಂತ್ ರಾವ್ ವಿಶೇಷ ಅತಿಥಿಯಾಗಿ ಭಾಗಿಯಾಗಿ ಚಿತ್ರತಂಡಕ್ಕೆ ಸಾಥ್ ಕೊಟ್ಟರು. ಇದೇ ವೇಳೆ ನಟ ಸಿದ್ದಾರ್ಥ್ ಮಾತನಾಡಿ, 3ಭುಇ ಸಿನಿಮಾ ತೆಲುಗು ಹಾಗೂ ಕನ್ನಡದಲ್ಲಿ ರಿಲೀಸ್ ಆಗುತ್ತಿದೆ.



## ಮಹಿಳಾ ಪ್ರಧಾನ 'ಫೀನಿಕ್ಸ್' ಚಿತ್ರದ ಚಿತ್ರೀಕರಣ ಪೂರ್ಣ

ಕನ್ನಡ ಚಿತ್ರರಂಗಕ್ಕೆ ಸಾಕಷ್ಟು ಸೂಪರ್ ಹಿಟ್ ಚಿತ್ರಗಳನ್ನು ನೀಡಿರುವ ನಿರ್ದೇಶಕ ಓಂಪ್ರಕಾಶ್ ರಾವ್ ನಿರ್ದೇಶನದ 49ನೇ ಚಿತ್ರ 'ಫೀನಿಕ್ಸ್'. ಆರ್ ವಾಸುದೇವ ರೆಡ್ಡಿ ಅರ್ಪಿಸುವ, ಶ್ರೀಗುರು ಚಿತ್ರಾಲಯ ಲಾಂಛನದಲ್ಲಿ ತ್ರಿಶಾ ಪ್ರಕಾಶ್ ಅವರು ನಿರ್ಮಾಣ ಮಾಡುತ್ತಿರುವ ಮಹಿಳಾ ಪ್ರಧಾನ ಈ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ಬೆಂಗಳೂರು, ಮೈಸೂರು, ಹಿಮವದ್ ಗೋಪಾಲಸ್ವಾಮಿ ಬೆಟ್ಟ ಹಾಗೂ ಉತ್ತರ ಕರ್ನಾಟಕದ ಹಲವು ಕಡೆ ಚಿತ್ರೀಕರಣ ನಡೆದಿದೆ. ಚಿತ್ರೀಕರಣ ಮುಗಿಸಿರುವ 'ಫೀನಿಕ್ಸ್' ಈಗ ಪೋಸ್ಟ್ ಪ್ರೊಡಕ್ಷನ್ ವರ್ಕ್‌ನಲ್ಲಿ ಬ್ಯುಸಿಯಾಗಿದೆ. ಬಹಳ ದಿನಗಳ ನಂತರ ಓಂಪ್ರಕಾಶ್ ರಾವ್ ಅವರ ನಿರ್ದೇಶನದಲ್ಲಿ ಮೂಡಿ ಬರುತ್ತಿರುವ 'ಫೀನಿಕ್ಸ್' ಚಿತ್ರದ ಬಗ್ಗೆ ಸಾಕಷ್ಟು ನಿರೀಕ್ಷೆ ಇದೆ. ಓಂಪ್ರಕಾಶ್ ರಾವ್ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದಿದ್ದು, ಸಂಭಾಷಣೆಯನ್ನು ದೀಪು ಪಿ.ಆರ್ ಬರೆದಿದ್ದಾರೆ. ರವಿಕುಮಾರ್ ಛಾಯಾಗ್ರಹಣ, ಲಕ್ಷ್ಮಣ್ ರೆಡ್ಡಿ ಅವರ ಸಂಕಲನವಿರುವ 'ಫೀನಿಕ್ಸ್' ಚಿತ್ರದಲ್ಲಿ ಮೈನವಿರೇಳಿಸುವ ಸಾಹಸ ಸನ್ನಿವೇಶಗಳಿದ್ದು, ಹೆಸರಾಂತ ಸಾಹಸ ನಿರ್ದೇಶಕರು ರವಿವರ್ಮ ಸಾಹಸ ನಿರ್ದೇಶನ ಮಾಡಿದ್ದಾರೆ.






## ಜುಲೈ 3 ರಂದೇ ತೆರೆಗೆ ಬಂದ "ತಪಸ್ಸಿ"



ಬೆಂಗಳೂರು ಮೂವೀಸ್ ಲಾಂಛನದಲ್ಲಿ ನಿರ್ಮಾಣವಾಗಿರುವ, ಸ್ಪೆನ್ಸರ್ ಮ್ಯಾಥ್ಯೂ ಅವರು ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶಿಸಿರುವ ಹಾಗೂ ಕ್ರೇಜಿಸ್ಟಾರ್ ರವಿ ಚಂದ್ರನ್ ವಿಶೇಷಪಾತ್ರದಲ್ಲಿ ನಟಿಸಿರುವ ವಿಭಿನ್ನ ಕಥಾಹಂದರ ಹೊಂದಿರುವ "ತಪಸ್ಸಿ" ಚಿತ್ರ ಈ ವಾರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. "ತಪಸ್ಸಿ" ಮಹಿಳಾ ಪ್ರಧಾನ ಚಿತ್ರವಾಗಿದ್ದು, ಅಮೆಯ್ರಾ ಗೋಸ್ವಾಮಿ ನಾಯಕಿಯಾಗಿ ನಟಿಸಿದ್ದಾರೆ. ಭಾಸ್ಕರ್, ಅನುಶಾ ಕಿಣಿ, ರಥರ್ವ, ಸಚ್ಚಿನ್, ಗುಬ್ಬಿ ನಟರಾಜ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ನಿರ್ದೇಶಕ ಸ್ಪೆನ್ಸರ್ ಮ್ಯಾಥ್ಯೂ ಅವರೆ ಛಾಯಾಗ್ರಹಣ ಹಾಗೂ ಕಲಾ ನಿರ್ದೇಶನವನ್ನೂ ಮಾಡಿರುವ "ತಪಸ್ಸಿ" ಚಿತ್ರಕ್ಕೆ ಅರುಣ್ ಪಿ ಥಾಮಸ್ ಸಂಕಲನವಿದೆ. ಆರವ್ ರಾಶಿಕ್ ಹಿನ್ನೆಲೆ ಸಂಗೀತ ನೀಡಿದ್ದಾರೆ. ಜುಲೈ 3 ರಂದು ತೆರೆ ಕಂಡಿದೆ.


## ಆಂಜನೇಯ ಅವತಾರವೆತ್ತ ಗೋಲ್ಡನ್ ಸ್ಟಾರ್..



ಕನ್ನಡ ಚಿತ್ರರಂಗದ ತ್ಯಾಗರಾಜರು ಅಂತಾನೇ ಖ್ಯಾತಿ ಪಡೆದಿರುವ ರಮೇಶ್ ಅರವಿಂದ್ ಹಾಗೂ ಗೋಲ್ಡನ್ ಸ್ಟಾರ್ ಗಣೇಶ್ ಕಾಂಬೋ ಒಂದಾಗಿರುವುದು ಗೊತ್ತೇ ಇದೆ. ಈ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದ್ದು, ಇಂದು ಗಣೇಶ್ ಹುಟ್ಟುಹಬ್ಬಕ್ಕೆ ಚಿತ್ರತಂಡ ವಿಶೇಷವಾಗಿ ಶುಭ ಕೋರಿದೆ. ಯುವರ್ ಸಿನ್ಸಿಯರ್ಲಿ ರಾಮ್ ಪೋಸ್ಟರ್ ಬಿಡುಗಡೆ ಮಾಡಿ ಗೋಲ್ಡನ್‌ಸ್ಟಾರ್‌ಗೆ ಬರ್ತಡೇ ಶುಭಾಶಯ ತಿಳಿಸಿದೆ. ಗಣೇಶ್ ಹಿಂದೆಂದೂ ಕಾಣದ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಭಜರಂಗಿ ಅವತಾರದಲ್ಲಿ ಮಳೆ ಹುಡ್ಗ ದರ್ಶನ ಕೊಟ್ಟಿದ್ದಾರೆ. ಹಿಮಾಲಯದ ಬ್ಯಾಕ್ ಡ್ರಾಪ್‌ನಲ್ಲಿ ಮೂಡಿ ಬಂದಿರುವ ಪೋಸ್ಟರ್‌ನಲ್ಲಿ ರಾಮ ಸೈಕಲ್ ಮೇಲೆ ಕುಳಿತಿದ್ದು, ಭಜರಂಗಿ ಭುಜದಲ್ಲಿ ಪೋಸ್ಟ್ ಮ್ಯಾನ್ ಬ್ಯಾಗ್ ಕಾಣಿಸುತ್ತದೆ. ಪೋಸ್ಟರ್ ಚಿತ್ರದ ಮೇಲಿನ ನಿರೀಕ್ಷೆ ಹೆಚ್ಚಿಸಿದೆ.

## ಪಿ.ಸಿ.ಶೇಖರ್ "ಮಹಾನ್" ಚಿತ್ರದಲ್ಲಿ ಮಿತ್ರ..

ಕನ್ನಡದಲ್ಲಿ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನಿರ್ದೇಶಿಸಿರುವ ಪಿ.ಸಿ.ಶೇಖರ್ ನಿರ್ದೇಶನದ, ಪ್ರತಿಷ್ಠಿತ ಸಂಸ್ಥೆಯ ಸಹಯೋಗದೊಂದಿಗೆ ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ಅವರು ನಿರ್ಮಿಸುತ್ತಿರುವ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಜನಪ್ರಿಯರಾಗಿರುವ ವಿಜಯ ರಾಘವೇಂದ್ರ ನಾಯಕರಾಗಿ ನಟಿಸುತ್ತಿರುವ "ಮಹಾನ್" ಚಿತ್ರದ ಪ್ರಮುಖ ಪಾತ್ರದಲ್ಲಿ ಮಿತ್ರ ಅಭಿನಯಿಸುತ್ತಿದ್ದಾರೆ. "ಮಹಾನ್" ಚಿತ್ರದ ಪಾತ್ರದ ಕುರಿತು ಮಿತ್ರ ನಾನು "ರಾಗ" ಚಿತ್ರದ ನಂತರ ನಿರ್ದೇಶಕ ಪಿ.ಸಿ.ಶೇಖರ್ ಅವರೊಟ್ಟಿಗೆ ಕೆಲಸ ಮಾಡುತ್ತಿದ್ದೇನೆ. "ರಾಗ" ಚಿತ್ರದ ನನ್ನ ಪಾತ್ರಕ್ಕೆ ಎಲ್ಲಾ ಕಡೆ ಮೆಚ್ಚುಗೆ ವ್ಯಕ್ತವಾಗಿತ್ತು. ಈಗ "ಮಹಾನ್" ಚಿತ್ರದಲ್ಲೂ ಪ್ರಮುಖಪಾತ್ರದಲ್ಲಿ ಅಭಿನಯಿಸುತ್ತಿದ್ದೇನೆ. ನಿರ್ದೇಶಕರು ಈ ಚಿತ್ರದ ಕಥೆ ಹೇಳಿದ ತಕ್ಷಣ ಇಷ್ಟವಾಗಿ ನಟಿಸಲು ಒಪ್ಪಿಕೊಂಡೆ ಎಂದು ತಮ್ಮ ಮಾತುಗಳ ಮೂಲಕ ತಿಳಿಸಿದ್ದಾರೆ.



## ರಂಜನಿ ರಾಘವನ್ ನಿರ್ದೇಶನದ "ಡಿಡಿ ಢಿಕ್ಕಿ"

ಜಡೇಶ್ ಹಂಪಿ ಅವರ ಹಂಪಿ ಪಿಕ್ಚರ್ಸ್ ಹಾಗೂ ರಾಮಕೃಷ್ಣ ಹಾಗೂ ಆನಂದ್ ಕುಮಾರ್ ನೇತೃತ್ವದ ಆರ್ ಕೆ ಮತ್ತು ಎ ಕೆ ಎಂಟರ್ಟೈನ್ಮೆಂಟ್ ಸಂಸ್ಥೆ ನಿರ್ಮಾಣದ, ಕಲಾವಿದೆಯಾಗಿ ಜನಪ್ರಿಯರಾಗಿರುವ ರಂಜನಿ ರಾಘವನ್ ಮೊದಲ ಬಾರಿಗೆ ನಿರ್ದೇಶನ ಮಾಡುತ್ತಿರುವ ಹಾಗೂ "ನೆನಪಿರಲಿ" ಪ್ರೇಮ್ ನಾಯಕರಾಗಿ ನಟಿಸುತ್ತಿರುವ ಚಿತ್ರ "ಡಿಡಿ ಢಿಕ್ಕಿ". ಗೋಲ್ಡನ್ ಸ್ಟಾರ್ ಗಣೇಶ್ ಅವರ ಪುತ್ರ ಮಾಸ್ಟರ್ ವಿಹಾನ್ ಕೂಡ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಪ್ರಸ್ತುತ ಈ ಚಿತ್ರದ ಚಿತ್ರೀಕರಣ ಬಿರುಸಿನಿಂದ ಸಾಗಿದೆ. ಹುಟ್ಟುಹಬ್ಬದ ಸಂಭ್ರಮದಲ್ಲಿರುವ ಗೋಲ್ಡನ್ ಸ್ಟಾರ್ ಗಣೇಶ್ ಅವರಿಗೆ "ಡಿ ಡಿ ಢಿಕ್ಕಿ" ಚಿತ್ರತಂಡ ಸಹ ವಿಶೇಷ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಶುಭಾಶಯ ತಿಳಿಸಿದೆ. ಲೆಜೆಂಡ್ ಇಳಯರಾಜ ಅವರ ಸಂಗೀತ ನಿರ್ದೇಶನವಿರುವ ಈ ಚಿತ್ರಕ್ಕೆ ಸುಧಾಕರ್ ಅವರ ಛಾಯಾಗ್ರಹಣವಿದೆ.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212